**ಕರ್ನಾಟಕ ಸರ್ಕಾರ** **ಕಾರ್ಮಿಕ ಇಲಾಖೆ**

ಸಂ: ಪಿ&ಎಸ್/ಎನ್ಎಫ್ಹೆಚ್/ಸಿಆರ್-1/2018-19

ಕಾರ್ಮಿಕ ಆಯುಕ್ತರ ಕಚೇರಿ
'ಕಾರ್ಮಿಕ ಭವನ' ಬನ್ನೇರುಘಟ್ಟ ರಸ್ತೆ
ಬೆಂಗಳೂರು-29 - ದಿನಾಂಕ: 25.05.2018

## ಸುತ್ತೋಲೆ

**ವಿಷಯ :** ದಿನಾಂಕ 28.5.2018 ರಂದು ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರಕ್ಕೆ (154-ವಿಧಾನಸಭಾ ಕ್ಷೇತ್ರ) ನಡೆಯಲಿರುವ ಚುನಾವಣೆಯ ದಿನದಂದು ರಾಜ್ಯಾದ್ಯಂತ ಅರ್ಹ ಮತದಾರ ಕಾರ್ಮಿಕರಿಗೆ ವೇತನ ಸಹಿತ ರಜೆಯನ್ನು ನೀಡುವ ಬಗ್ಗೆ.

**ಉಲ್ಲೇಖ :** (1) ಭಾರತ ಚುನಾವಣಾ ಆಯೋಗದ ಪತ್ರ ಸಂಖ್ಯೆ: ಇಸಿಐ/ಪಿಎನ್/22/2018, ದಿನಾಂಕ : 27.03.2018

(2) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಟಿಪ್ಪಣಿ ನಂ.ಮುಕಾ/3834/2018 ದಿನಾಂಕ 12.04.2018

= = =

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಭಾರತ ಚುನಾವಣಾ ಆಯೋಗವು ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರಕ್ಕೆ (154-ವಿಧಾನಸಭಾ ಕ್ಷೇತ್ರ) ದಿನಾಂಕ: 28.05.2018 (ಸೋಮವಾರ) ರಂದು ಚುನಾವಣೆ ನಿಗದಿಪಡಿಸಿದೆ.

ಚುನಾವಣೆ ನಡೆಯುವ ದಿನದಂದು ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರದಲ್ಲಿ (154-ವಿಧಾನಸಭಾ ಕ್ಷೇತ್ರ) ಮತದಾರರಾಗಿರುವ ಎಲ್ಲಾ ಕಾರ್ಮಿಕರಿಗೆ ಸಂಬಂಧಪಟ್ಟ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು 1963ರ ಕರ್ನಾಟಕ ಔದ್ಯೋಗಿಕ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ರಜಾದಿನಗಳು) ಕಾಯ್ದೆಯ ಕಲಂ 3-ಎ ಪ್ರಕಾರ ಅರ್ಹ ಮತದಾರರಾಗಿರುವ ಕಾರ್ಮಿಕರಿಗೆ ಮತ ಚಲಾಯಿಸಲು ಅವಕಾಶ ಮಾಡಿ ಕೊಡಬೇಕಾಗುತ್ತದೆ. ಆದ್ದರಿಂದ ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರದಲ್ಲಿ ಮತ ಚಲಾಯಿಸಲು ಅರ್ಹರಿರುವ ಎಲ್ಲಾ ಕಾರ್ಮಿಕ ಮತದಾರರಿಗೆ ದಿನಾಂಕ: 28.05.2018 (ಸೋಮವಾರ) ರಂದು ವೇತನ ಸಹಿತ ರಜೆ ನೀಡಿ, ಎಲ್ಲಾ ಅರ್ಹ ಕಾರ್ಮಿಕರು ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಕಾನೂನಿನನ್ವಯ ಚಲಾಯಿಸಲು ಅನುವು ಮಾಡಿಕೊಡಲು ಸೂಚಿಸಲಾಗಿದೆ.

ಈ ವಿಷಯದಲ್ಲಿ ಯಾವುದೇ ಕಾರ್ಮಿಕರಿಗೆ ಸಂವಿಧಾನಾತ್ಮಕ/ಶಾಸನಾತ್ಮಕ ಹಕ್ಕಾದ ಮತವನ್ನು ಚಲಾಯಿಸಲು ರಜೆ ನೀಡದೆ ಹಾಗೂ ಮತದಾನಕ್ಕೆ ಅವಕಾಶ ಮಾಡಿಕೊಡದಿದ್ದಲ್ಲಿ ಅಂತಹ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳ ವಿರುದ್ಧ 1963ರ ಕರ್ನಾಟಕ ಕೈಗಾರಿಕಾ ಸಂಸ್ಥೆಗಳ (ರಾಷ್ಟ್ರೀಯ ಹಾಗೂ ಹಬ್ಬದ ದಿನಗಳು) ಕಾಯ್ದೆಯ ಕಲಂ 3-ಎ ರಡಿಯಲ್ಲಿ ಹಾಗೂ 1951ರ ಪ್ರಜಾಪ್ರಾತಿನಿಧ್ಯ ಕಾಯ್ದೆಯ ಕಲಂ 135(ಬಿ)ರಡಿಯಲ್ಲಿ ಕಾನೂನು ಕ್ರಮ ಜರುಗಿಸಲಾಗುವುದು.

25/5/2018



Scanned by CamScanner

ರಾಜರಾಜೇಶ್ವರಿನಗರ ವಿಧಾನಸಭಾ ಕ್ಷೇತ್ರ (154–ವಿಧಾನಸಭಾ ಕ್ಷೇತ್ರ) ವ್ಯಾಪ್ತಿಗೆ ಬರುವ ಕಾರ್ಮಿಕರು ಕಾರ್ಮಿಕ ಸಂಘಗಳು/ಮಾಲೀಕರ ಸಂಘಗಳ ಪ್ರತಿನಿಧಿಗಳ ಗಮನಕ್ಕೆ ತರಲು ಸಕಲ ಕ್ರಮಗಳನ್ನು ಕೈಗೊಳ್ಳಲು ಹಾಗೂ ಸರ್ಕಾರದ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಈ ಮೂಲಕ ಸಂಬಂಧಪಟ್ಟ ಅಧಿಕಾರಿಗಳು/ನಿರೀಕ್ಷಕರುಗಳಿಗೆ ಸೂಚಿಸಲಾಗಿದೆ.

25/5/2018

ಕಾರ್ಮಿಕ ಆಯುಕ್ತರ ಪರವಾಗಿ
**ಅಪರ ಕಾರ್ಮಿಕ ಆಯುಕ್ತರು [ಆಡಳಿತ]**

**ಗೆ:**

ಆಡಳಿತವರ್ಗ, ಎಲ್ಲಾ ಅಂಗಡಿಗಳು, ವಾಣಿಜ್ಯ ಸಂಸ್ಥೆಗಳು, ಕಾರ್ಖಾನೆಗಳು ಮತ್ತು ಇತರೆ ಸಂಸ್ಥೆಗಳು

**ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ**

1) ಎಲ್ಲಾ ಉಪ ಕಾರ್ಮಿಕ ಆಯುಕ್ತರುಗಳು
2) ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರುಗಳು
3) ಎಲ್ಲಾ ಕಾರ್ಮಿಕ ಅಧಿಕಾರಿಗಳು,

→ **ತಮ್ಮ ಅಧೀನದಲ್ಲಿ ಬರುವ ಎಲ್ಲಾ ಹಿರಿಯ ಕಾರ್ಮಿಕ ನಿರೀಕ್ಷಕರು / ಕಾರ್ಮಿಕ ನಿರೀಕ್ಷಕರುಗಳಿಗೆ ಸೂಚಿಸುವುದು**

***ಪ್ರತಿಯನ್ನು ಮಾಹಿತಿಗಾಗಿ*** :

1) ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
2) ಮುಖ್ಯ ಚುನಾವಣಾಧಿಕಾರಿಗಳು, ನಿರ್ವಾಚನ ನಿಲಯ, ಶೇಷಾದ್ರಿ ರಸ್ತೆ, ಬೆಂಗಳೂರು
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು
4) ಸರ್ಕಾರದ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ, ಬೆಂಗಳೂರು
5) ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು
6) ಅಪರ ಕಾರ್ಮಿಕ ಆಯುಕ್ತರು (ಆಡಳಿತ / ಕೈಗಾರಿಕಾ ಬಾಂದವ್ಯ), ಬೆಂಗಳೂರು
7) ಜಂಟಿ ಕಾರ್ಮಿಕ ಆಯುಕ್ತರು (ಕನಿಷ್ಠ ವೇತನ), ಬೆಂಗಳೂರು



Scanned by CamScanner